# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 940 |
| ಸದಸ್ಯರ ಹೆಸರು | : | ಶ್ರೀ ಎನ್.ಎಸ್.ಬೋಸ್‌ರಾಜು |
| ಉತ್ತರಿಸುವ ದಿನಾಂಕ | : | 12/03/2020 |
| ಉತ್ತರಿಸುವ ಸಚಿವರು | : | ಮಾನ್ಯ ಗೃಹ ಸಚಿವರು |

| ಪ್ರಶ್ನೆ | ಉತ್ತರ |
|---|---|
| ಅ) ರಾಯಚೂರು ನಗರದಲ್ಲಿರುವ ಕೇಂದ್ರ ಕಾರಾಗೃಹವನ್ನು ನಗರದ ಹೊರವಲಯದಲ್ಲಿರುವ ಬೀಜನಗೇರಿ ಗ್ರಾಮದ ಹತ್ತಿರ ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಜಿಲ್ಲಾ ಕಾರಾಗೃಹವನ್ನು ಸ್ಥಳಾಂತರಿಸಲು ರಾಯಚೂರು ಜಿಲ್ಲೆಯ ಬೀಜನಗೇರಾ ಗ್ರಾಮದ ಸರ್ವೆ ನಂ.30ರಲ್ಲಿನ 21 ಎಕರೆ 15 ಗುಂಟೆ ಸರ್ಕಾರಿ ಜಮೀನನ್ನು ಗುರುತಿಸಲಾಗಿದ್ದು, ಶೀಘ್ರವಾಗಿ ಮಂಜೂರು ಮಾಡುವಂತೆ ಜಿಲ್ಲಾಡಳಿತವನ್ನು ಕೋರಲಾಗಿದೆ. |
| ಆ) ರಾಯಚೂರು ಜಿಲ್ಲೆಯಲ್ಲಿ ನೂತನ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆಯ ಲಿಂಗಸುಗೂರಿನಲ್ಲಿ ಹೊಸದಾಗಿ ಸಂಚಾರಿ ಪೊಲೀಸ್ ಠಾಣೆಯನ್ನು ತೆರೆಯುವ ಕುರಿತು ದಿನಾಂಕ:10/12/2019ರಂದು ಪೊಲೀಸ್ ಅಧೀಕ್ಷಕರು, ರಾಯಚೂರು ಜಿಲ್ಲೆರವರು ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ರಾಷ್ಟ್ರೀಯ ಪೊಲೀಸ್ ಆಯೋಗದಲ್ಲಿನ ಮಾರ್ಗಸೂಚಿಯನ್ವಯ ಇರುವ ಮಾನದಂಡಗಳನ್ನು ಪೂರೈಸಿರುವುದಿಲ್ಲ. ಆದಾಗ್ಯೂ ನಿಯಮಾನುಸಾರ ಪರಿಶೀಲಿಸಲಾಗುವುದು. |
| ಇ) ರಾಯಚೂರು ಜಿಲ್ಲೆಯಲ್ಲಿ ನೂತನ ತಾಲ್ಲೂಕುಗಳಾದ ಸಿರವಾರ, ಮಸ್ಕಿ ತಾಲ್ಲೂಕುಗಳಲ್ಲಿ ಸರ್ಕಲ್ ಇನ್ಸ್ ಪೆಕ್ಟರವರ ಕಛೇರಿ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಯಚೂರು ಜಿಲ್ಲೆಯಲ್ಲಿ ಹೊಸದಾಗಿ ಸಿರವಾರ ತಾಲ್ಲೂಕು ಸೃಜನೆಯಾದ ಹಿನ್ನೆಲೆಯಲ್ಲಿ ಸಿರವಾರ ವೃತ್ತ ಕಛೇರಿಯನ್ನು ಪ್ರಾರಂಭಿಸುವ ಕುರಿತಾದ ಪ್ರಸ್ತಾವನೆಯು ಇಲಾಖೆಯಲ್ಲಿ ಪರಿಶೀಲನಾ ಹಂತದಲ್ಲಿರುತ್ತದೆ.<br><br>ರಾಯಚೂರು ಜಿಲ್ಲೆಯ ಮಸ್ಕಿ ತಾಲ್ಲೂಕಿನಲ್ಲಿ ಮಸ್ಕಿ ವೃತ್ತ ಕಛೇರಿಯು ಈಗಾಗಲೇ ಕಾರ್ಯನಿರ್ವಹಿಸುತ್ತಿರುತ್ತದೆ. |
| ಈ) ರಾಯಚೂರು ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಸೌಲಭ್ಯ ಒದಗಿಸಲು ಸರ್ಕಾರವು ಪೊಲೀಸ್ ಗೃಹ 2020 ಯೋಜನೆಯನ್ನು ಪ್ರಾರಂಭಿಸಿದ್ದು, ಇದರಡಿಯಲ್ಲಿ ರಾಯಚೂರು ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗಳಿಗೆ 120 ಮತ್ತು ಅಧಿಕಾರಿಗಳಿಗೆ 04 ಒಟ್ಟು 124 ವಸತಿಗೃಹಗಳನ್ನು ಹೊಸದಾಗಿ ನಿರ್ಮಿಸಲಾಗಿರುತ್ತದೆ. |

ಸಂಖ್ಯೆ: ಹೆಚ್ ಡಿ 49 ಪಿಆರ್ ಎ 2020

(ಬಸವರಾಜ್ ಬೊಮ್ಮಾಯಿ)
ಗೃಹ ಸಚಿವರು